# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸರ್ವಜ್ಞನಗರ ವಿದಾನಸಭಾ ಕ್ಷೇತ್ರದ ವ್ಯಾಪ್ತಿಯ ವಾರ್ಡ್ ಸಂಖ್ಯೆ.28 ಕಮ್ಮನಹಳ್ಳಿಗೆ ಸಂಬಂಧಿಸಿದಂತೆ ವಾರ್ಡ್ ಸಮಿತಿಯ ಸಭೆಯನ್ನು ದಿನಾಂಕ: 05-12-2020 ರಂದು ಆಯೋಜಿಸಿದ್ದು, ಸದರಿ ವಾರ್ಡ್ ಸಮಿತಿ ಸಭೆಯ ನಡವಳಿಗಳು**

1. ಶ್ರೀ ನಾಗಪ್ಪ ಕಮತಿ (ನೋಡಲ್ ಅಧಿಕಾರಿ)
2. ಶ್ರೀ ಎಸ್. ರಾಜನ್ (ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು)
3. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು,
4. ಶ್ರೀಮತಿ ಶ್ರೀಲಕ್ಷ್ಮಿ, ಕಿರಿಯ ಆರೋಗ್ಯ ನಿರೀಕ್ಷಕರು,
5. ಶ್ರೀ ಶ್ರೀನಿವಾಸ್.ಪಿ, ಕಂದಾಯ ನಿರೀಕ್ಷಕರು,
6. ಶ್ರೀ ಜೋಶ್ವ, ಕರ ವಸೂಲಿಗಾರರು,
7. ಶ್ರೀ ಕೆ.ಚಂದ್ರಶೇಖರ್,
8. ಶ್ರೀಮತಿ ಜೆ.ಸಿ ಗೀತಾ, ಕಿರಿಯ ಅಭಿಯಂತರರು, ಬೆಸ್ಕಾಂ ಇಲಾಖೆ

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

1) **ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ,**

- ವಾರ್ಡ್ ವ್ಯಾಪ್ತಿಯಲ್ಲಿ ಪ್ರಸ್ತುತ ಪ್ರಗತಿಯಲ್ಲಿರುವ ಕಾಮಗಾರಿಗಳ ವಿವರಗಳ ಬಗ್ಗೆ ವಿಚಾರಿಸಿದಾಗ, 2019-17ನೇ ಸಾಲಿನ ಪಿ.ಓ.ಡಬ್ಲ್ಯೂ ಅನುದಾನದಲ್ಲಿ ಜೈ ಭಾರತ್‌ನಗರ, ಅರಳಿಮರ ರಸ್ತೆ ಮತ್ತು ಕಮ್ಮನಹಳ್ಳಿ ವ್ಯಾಪ್ತಿಯಲ್ಲಿ ಬೋರ್‌ವೆಲ್‌ಗಳನ್ನು ಕೊರೆಯಲು ಅನುಮೋದನಗೆ ಸಲ್ಲಿಸಿದ್ದು, ಅನುಮೋದನೆ ದೊರೆತ ತಕ್ಷಣ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಲಾಯಿತು.

- ವಾರ್ಡ್ ವ್ಯಾಪ್ತಿಯಲ್ಲಿ ಕಂದಾಯ ವಸೂಲಾತಿಯ ಬಗ್ಗೆ ಕಂದಾಯ ಇಲಾಖೆಯ ಅಧಿಕಾರಿಗಳಿಗೆ ವಿಚಾರಿಸಿದಾಗ, ಕಂದಾಯ ಇಲಾಖೆಯ ಅಧಿಕಾರಿಗಳು ಮಾತನಾಡಿ, ಕಮ್ಮನಹಳ್ಳಿ ವಾರ್ಡಿನಲ್ಲಿ ಒಟ್ಟು 960 ಮನೆಗಳಿಂದ ಒಟ್ಟು 44.00 ಲಕ್ಷಗಳ ತೆರಿಗೆ ವಸೂಲಾತಿ ಬಾಕಿ ಇದ್ದು, ಅತೀ ತುರ್ತಾಗಿ ಕಂದಾಯ ವಸೂಲಾತಿಯನ್ನು ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

- ಕಮ್ಮನಹಳ್ಳಿ ವಾರ್ಡ್‌ನಲ್ಲಿ ನಿರ್ವಹಿಸಿದ ಮತ್ತು ನಿರ್ವಹಿಸುತ್ತಿರುವ ಕಾಮಗಾರಿಗಳ ವಿವರ ಹಾಗೂ ಪ್ರಸ್ತುತ ಯಾವ ಹಂತದಲ್ಲಿದೆ ಎಂಬುದರ ಬಗ್ಗೆ ಸಂಪೂರ್ಣ ವಿವರವನ್ನು ನೀಡಲು ಸೂಚಿಸಿದರು.

2) **ಬೆಸ್ಕಾಂ ಇಲಾಖೆಯ ಅಧಿಕಾರಿಗಳು ಮಾತನಾಡಿ,** ಕಮ್ಮನಹಳ್ಳಿ, ವೆಂಕಟೇಶ್ವರ ಟೆಂಟ್ ಹಿಂಭಾಗದಲ್ಲಿರುವ ಆಟದ ಮೈದಾನಕ್ಕೆ ಹೊಂದಿಕೊಂಡಂತೆ ಇರುವ ಶುದ್ಧ ಕುಡಿಯುವ ನೀರಿನ ಘಟಕಕ್ಕೆ ಅನಧಿಕೃತವಾಗಿ ವಿದ್ಯುತ್

ಸಂಪರ್ಕ ಕಲ್ಪಿಸಿದ್ದು, ಸದರಿ ಶುದ್ಧ ಕುಡಿಯುವ ನೀರಿನ ಘಟಕಕ್ಕೆ ಮೀಟರ್ ಅಳವಡಿಸಲು ಕ್ರಮ ವಹಿಸಲು ಸಭೆಯಲ್ಲಿ ತಿಳಿಸಿದರು.

3) **ತೋಟಗಾರಿಕಾ ಇಲಾಖೆಯ ಅಧಿಕಾರಿಗಳು ಮಾತನಾಡಿ,** ಕಮ್ಮನಹಳ್ಳಿ ವ್ಯಾಪ್ತಿಯ ನಾರಾಯಣಪ್ಪ ಪಾರ್ಕ್‌ನಲ್ಲಿ ಬೀದಿ ದೀಪಗಳು ಸರಿಯಾಗಿ ಉರಿಯುತ್ತಿರುವುದಿಲ್ಲ ಇದರಿಂದ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುವುದಾಗಿ, ಕೂಡಲೇ ಬೀದಿ ದೀಪಗಳ ದುರಸ್ಥಿ ಕಾರ್ಯವನ್ನು ನಿರ್ವಹಿಸಲು ಸಭೆಗೆ ತಿಳಿಸಿದರು.

4) **ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ,** ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ಪ್ರಕರಣಗಳಿಗೆ ಸಂಬಂಧಿಸಿದಂತೆ ಸಭೆಯಲ್ಲಿ ಪ್ರಸ್ತಾಪಿಸಿದಾಗ, ಕಾಂಟಾಕ್ಟ್ ಟ್ರೇಸಿಂಗ್ ಮಾಡುತ್ತಿಲ್ಲ ಆದರೂ ಸಹ 2 ಕೇಸ್ ಬರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ವಿಷಯಗಳ ಬಗ್ಗೆ ಆಯಾ ಇಲಾಖೆಯ ಅಧಿಕಾರಿ / ನೌಕರರುಗಳು ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

**ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿ,**

**ನೋಡೆಲ್ ಅಧಿಕಾರಿ**
**ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿ**

**ಪ್ರತಿಯನ್ನು**

1) ಕಾರ್ಯಪಾಲಕ ಅಭಿಯಂತರರು, ಸರ್ವಜ್ಞನಗರ ವಿಭಾಗ, ಬಿ.ಬಿ.ಎಂ.ಪಿ
2) ಕಾರ್ಯಪಾಲಕ ಅಭಿಯಂತರರು, ಯೋಜನೆ (ಪೂರ್ವ ವಲಯ) ಬಿ.ಬಿ.ಎಂ.ಪಿ
3) ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಪೂರ್ವ ವಲಯ) ಬಿ.ಬಿ.ಎಂ.ಪಿ
4) ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
5) ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ
6) ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು.ಬಿ.ಬಿ.ಎಂ.ಪಿ
7) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ಬಿ.ಬಿ.ಎಂ.ಪಿ
8) ತೋಟಗಾರಿಕಾ ಅಧೀಕ್ಷಕರು, (ಪೂರ್ವ ವಲಯ)
9) ಆರೋಗ್ಯ ವೈದ್ಯಾಧಿಕಾರಿಗಳು, (ಪೂರ್ವ ವಲಯ)
10) ಕಾಂಟಾಕ್ಟ್ ಟ್ರೇಸಿಂಗ್ ನೋಡಲ್ ಅಧಿಕಾರಿ, ಸರ್ವಜ್ಞನಗರ ವಿಭಾಗ, ಬಿ.ಬಿ.ಎಂ.ಪಿ
11) ಹೋಮ್ ಕ್ವಾರೆಂಟೈನ್ ಸ್ಕ್ವಾಡ್ ನೋಡಲ್ ಅಧಿಕಾರಿ, ಸರ್ವಜ್ಞನಗರ ವಿಭಾಗ, ಬಿ.ಬಿ.ಎಂ.ಪಿ
12) ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣಾ ವಿಭಾಗ
13) ಸಹಾಯಕ ಕಂದಾಯ ಅಧಿಕಾರಿ, ಮಾರುತಿ ಸೇವಾ ನಗರ ಉಪವಿಭಾಗ
14) ಕಲ್ಯಾಣಾಧಿಕಾರಿಗಳು, (ಪೂರ್ವ ವಲಯ) ಬಿ.ಬಿ.ಎಂ.ಪಿ
15) ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, (ಪೂರ್ವ ವಲಯ) ಬಿ.ಬಿ.ಎಂ.ಪಿ
16) ಪೋಲಿಸ್ ಇನ್ಸ್‌ಪೆಕ್ಟರ್, ಬಾಣಸವಾಡಿ.
17) ಪೋಲಿಸ್ ಇನ್ಸ್‌ಪೆಕ್ಟರ್,(ಸಂಚಾರಿ), ಬಾಣಸವಾಡಿ.
18) ಕಛೇರಿ ಪ್ರತಿ.